All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

24.02.2025 6.40 P.M.

***************

ಮುಖ್ಯಾಂಶಗಳು

- ಅನ್ನಭಾಗ್ಯ, ಗೃಹಲಕ್ಷ್ಮಿ ಹಣ ಸದ್ಯದಲ್ಲೇ ಬಿಡುಗಡೆ - ಸಚಿವ ಎಚ್.ಕೆ.ಪಾಟೀಲ್ ಭರವಸೆ
- ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಲಿಂಗಾಯತ ಮಠಾಧೀಶರಿಂದ ಮುಖ್ಯಮಂತ್ರಿಗೆ ಮನವಿ
- ಬೆಳಗಾವಿಯಲ್ಲಿ ಕನ್ನಡಿಗರಿಗೆ ರಕ್ಷಣೆಯೇ ಇಲ್ಲ- ಸರ್ಕಾರದ ವಿರುದ್ಧ ಕೇಂದ್ರ ಸಚಿವ ಕುಮಾರಸ್ವಾಮಿ ಅಸಮಾಧಾನ
- ಕೃಷಿ ವಿಶ್ವವಿದ್ಯಾಲಯಗಳು ಸಂಶೋಧನೆಗೆ ಹೆಚ್ಚಿನ ಆದ್ಯತೆ ನೀಡಬೇಕು- ಸಚಿವ ಚಲುವರಾಯಸ್ವಾಮಿ
- ಬೆಂಗಳೂರಿನಲ್ಲಿ ಜಲಮಂಡಳಿಗೆ ಕುಡಿಯುವ ನೀರು ಶುದ್ಧೀಕರಣ ಘಟಕ ಹಸ್ತಾಂತರಿಸಿದ ಬಿಬಿಎಂಪಿ

****************

ಗ್ಯಾರಂಟಿ ಯೋಜನೆಗಳಿಗೆ ಯಾವುದೇ ತೊಂದರೆಯಾಗದಂತೆ ಕಾರ್ಯ ನಿರ್ವಹಿಸಲಾಗುವುದು ಎಂದು ಕಾನೂನು ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ಬಳ್ಳಾರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್ಕಾಂಗಳಿಗೆ ಪಾವತಿಯಾಗದ ಗೃಹ ಜ್ಯೋತಿ ಹಣ ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಿದೆ. ಅದರಂತೆ ಗೃಹ ಲಕ್ಷ್ಮೀ ಹಣವನ್ನು ಶೀಘ್ರವೇ ಬಿಡುಗಡೆ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಜನರ ಎಲ್ಲಾ ಗೊಂದಲಗಳಿಗೆ ಬಜೆಟ್ ನಲ್ಲಿ ಉತ್ತರ ಸಿಗಲಿದೆ ಎಂದು ತಿಳಿಸಿದ್ದಾರೆ.

****************

ಶರಣರ ಜನ್ಮ ಸ್ಥಳ, ಐಕ್ಯಸ್ಥಳ ಹಾಗೂ ಇತರೆ ಸ್ಮಾರಕಗಳ ರಕ್ಷಣೆಗಾಗಿ ಶರಣ ಸ್ಮಾರಕ ರಕ್ಷಣಾ ಪ್ರಾಧಿಕಾರ ರಚನೆ, ಬಸವ ತತ್ವ ಪ್ರಚಾರಕ್ಕೆ ೫೦೦ ಕೋಟಿ ನೆರವು ಸೇರಿದಂತೆ ವಿವಿಧ

ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಲಿಂಗಾಯತ ಮಠಾಧೀಶರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಇಂದು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಠಾಧೀಶರ ಬೇಡಿಕೆಗಳನ್ನು ಹಂತಹಂತವಾಗಿ ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.

ಬಸವಣ್ಣನವರ ವಿಚಾರ ಮತ್ತು ಹೋರಾಟ ಜಾತ್ಯಾತೀತ ಸಮಾಜ ನಿರ್ಮಾಣಕ್ಕೆ ಪೂರಕವಾಗಿದೆ ಎಂದು ತಿಳಿಸಿದರು.

****************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅನುಕೂಲಕ್ಕೆ ತಕ್ಕಂತೆ ಲೋಕಾಯುಕ್ತ ವರದಿ ಸಿದ್ದಪಡಿಸಲಾಗಿದೆ ಎಂದು ಕೇಂದ್ರ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ಜಮೀನು ತನಿಖೆಗೆ ರಾಜ್ಯದ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಐಐಎಸ್ ಅಧಿಕಾರಿಗಳನ್ನು ಎಸ್ಐಟಿಯಿಂದ ನೇಮಕ ಮಾಡಲಾಗಿದೆ ಎಂದು ದೂರಿದ್ದಾರೆ.

ಇದೇ ವೇಳೆ ಬೆಳಗಾವಿಯಲ್ಲಿ ಕನ್ನಡಿಗರಿಗೆ ರಕ್ಷಣೆಯೇ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಉದಯಗಿರಿ ಗಲಭೆಯ ಆರೋಪಿಗಳಿಗೆ ನಿರ್ದಯವಾಗಿ ಶಿಕ್ಷೆಗೆ ಒಳಪಡಿಸುವಂತೆ ಆಗ್ರಹಿಸಿದ್ದಾರೆ. ರಾಜ್ಯದಲ್ಲಿ ಶಾಂತಿ, ಸುವ್ಯವಸ್ಥೆ ಹದಗೆಟ್ಟಿದೆ ಎಂದು ಆರೋಪಿಸಿದ್ದಾರೆ.

****************

ಕೃಷಿ ಹಾಗೂ ರೈತರ ಅಭ್ಯುದಯವೇ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಗಳ ಮೂಲ ಆಶಯವಾಗಿದೆ ಎಂದು ಕೃಷಿ ಮತ್ತು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೂಚನೆ ನೀಡಿದ್ದಾರೆ

ವಿಧಾನಸೌಧದಲ್ಲಿಂದು ರಾಜ್ಯದ ವಿವಿಧ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು ಹಾಗೂ ಕೃಷಿ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಚಿವರು ರೈತರ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಕೃಷಿ ವಿಶ್ವವಿದ್ಯಾಲಯಗಳು ಸಂಶೋಧನೆ ಮತ್ತು ಪ್ರಾತ್ಯಕ್ಷಿಕೆಗಳಿಗೆ ಹೆಚ್ಚು ಆದ್ಯತೆ ನೀಡಬೇಕು. ರೈತರನ್ನು ತಾಂತ್ರಿಕವಾಗಿ ಸಶಕ್ತರನ್ನಾಗಿ ಮಾಡಿ ಕೃಷಿ ಕ್ಷೇತ್ರವನ್ನು ಸದೃಢಗೊಳಿಸಬೇಕು ಎಂದು ನಿರ್ದೇಶನ ನೀಡಿದರು.

ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಗಳು ಎದುರಿಸುತ್ತಿರುವ ತಾಂತ್ರಿಕ, ಆಡಳಿತಾತ್ಮಕ ಮತ್ತು ಆರ್ಥಿಕ ಸಮಸ್ಯೆ ಹಾಗೂ ಸವಾಲುಗಳನ್ನು ಕುರಿತು ಆದ್ಯತೆ ಮೇರೆಗೆ ಪಟ್ಟಿ ಮಾಡಿ ಪ್ರಸ್ತಾವನೆ ಸಿದ್ಧಪಡಿಸುವಂತೆ ಸೂಚಿಸಿದ ಸಚಿವರು ಈ ಬಗ್ಗೆ ಮಾರ್ಚ್ ನಂತರ ಮುಖ್ಯಮಂತ್ರಿ ಜೊತೆ ಚರ್ಚೆ ನಡೆಸುವುದಾಗಿ ತಿಳಿಸಿದ್ದಾರೆ.

****************

"ಬಿಬಿಎಂಪಿ ನಿರ್ವಹಣೆ ಮಾಡುತ್ತಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆಯ ಹೊಣೆಯನ್ನು ಬೆಂಗಳೂರು ಜಲಮಂಡಳಿಗೆ ಹಸ್ತಾಂತರ ಮಾಡುವಂತೆ ಬೆಂಗಳೂರು ನಗರಾಭಿವೃದ್ಧಿ ಸಚಿವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಈ ಬಗ್ಗೆ ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಪತ್ರ ಬರೆದಿರುವ ಡಿ.ಕೆ.ಶಿವಕುಮಾರ್ ಬೆಂಗಳೂರು ನಗರದ ನಾಗರೀಕರಿಗೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಜವಾಬ್ದಾರಿಯನ್ನು ಬೆಂಗಳೂರು ಜಲಮಂಡಳಿ ನಿರ್ವಹಿಸುತ್ತಿದೆ. ಆದರೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಬಿಬಿಎಂಪಿ ನಿರ್ವಹಣೆ ಮಾಡುತ್ತಿದೆ. ಬೇಸಿಗೆ ಆರಂಭವಾಗುತ್ತಿದ್ದು, ಒಂದು ವೇಳೆ ಕೊಳವೆಬಾವಿಗಳು ಬತ್ತಿ ಹೋದರೆ ಆರ್.ಓ. ಘಟಕಗಳಿಗೆ ಬೇಕಾಗುವ ನೀರನ್ನು ಬೆಂಗಳೂರು ಜಲಮಂಡಳಿ ಮುಖಾಂತರವೇ ಪೂರೈಸಬೇಕಾಗುತ್ತದೆ ಎಂದು ತಿಳಿಸಿದ್ದಾರೆ.

ಇತ್ತೀಚೆಗೆ ಡಿ.ಕೆ.ಶಿವಕುಮಾರ್ ಬೆಂಗಳೂರು ನಗರ ಸಂಚಾರ ಕೈಗೊಂಡು ಪರಿಶೀಲಿಸಿದ ವೇಳೆ ಬೆಂಗಳೂರು ನಗರದ ಕೆಲವು ಆರ್.ಓ. ಪ್ಲಾಂಟ್ ಗಳು ಕೆಲಸ ಮಾಡದೇ ಇರುವುದನ್ನು ಗಮನಿಸಿದ್ದರು. ಈ ಬಗ್ಗೆ ವರದಿ ನೀಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರಿಗೆ ಸೂಚನೆ ನೀಡಿದ್ದರು.

****************

೨೦೨೮ರ ಚುನಾವಣೆಗೆ ಸಜ್ಜಾಗುವಂತೆ ಪರಾಜಿತ ಅಭ್ಯರ್ಥಿಗಳಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚನೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ವಿಧಾನಸಭಾ ಚುನಾವಣೆಯನ್ನು ಸೋತಿರುವ ಕ್ಷೇತ್ರಗಳ ಪೈಕಿ ಸುಮಾರು ೬೦ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲ್ಲುವ ಸಾಧ್ಯತೆಯಿದೆ ಎಂದು ಪಕ್ಷದ ಆಂತರಿಕ ಸಮೀಕ್ಷೆಗಳು ವರದಿ ನೀಡಿವೆ ಎಂದು ತಿಳಿಸಿದ್ದಾರೆ.

ಮುಖ್ಯಮಂತ್ರಿ ಸೇರಿದಂತೆ ಎಲ್ಲಾ ಸಚಿವರು ತಮ್ಮ ಕ್ಷೇತ್ರಗಳಲ್ಲಿ ಕಾರ್ಯಕರ್ತರ ಸಭೆ ನಡೆಸಬೇಕು ಎಂದು ಹೇಳಿದ್ದಾರೆ.

ಮಾರ್ಚ್ ೨೩ ರಿಂದ ಏಪ್ರಿಲ್ ೧ ರೊಳಗೆ ಈ ಗುರಿ ಪೂರ್ಣಗೊಳಿಸುವಂತೆ ಸ್ಪಷ್ಟಪಡಿಸಿದ್ದಾರೆ.

****************

ಭದ್ರಾ ಮೇಲ್ದಂಡೆ ಯೋಜನೆಗೆ ಮೂರು ೩ ಸಾವಿರ ಕೋಟಿ ರೂಪಾಯಿ ಅನುದಾನ ಮೀಸಲಿಡುವಂತೆ ರಾಜ್ಯ ಸರ್ಕಾರವನ್ನು ಕೋರಲಾಗಿದೆ ಎಂದು ಚಿತ್ರದುರ್ಗ ಉಸ್ತುವಾರಿ ಸಚಿವ ಡಿ.ಸುಧಾಕರ್ ತಿಳಿಸಿದ್ದಾರೆ.

ಚಿತ್ರದುರ್ಗ ಜಿಲ್ಲಾ ನೀರಾವರಿ ಅನುಷ್ಠಾನ ಸಮಿತಿ ಮತ್ತು ಜನ ಪ್ರತಿನಿಧಿಗಳ ಸಭೆಯಲ್ಲಿ ಮಾತನಾಡಿದ ಅವರು, ಕೇಂದ್ರ ಸರಕಾರವು ಈ ಮೊದಲು ಘೊಷಣೆ ಮಾಡಿದಂತೆ ೫ ಸಾವಿರದ ೩೦೦ ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿದಲ್ಲಿ ಕಾಮಗಾರಿಯು ವೇಗವನ್ನು ಪಡೆಯಲಿದೆ. ೨೦೨೮ರ ಹೊತ್ತಿಗೆ ಯೋಜನೆಯನ್ನು ಪೂರ್ಣಗೊಳಿಸಲು ಸಾದ್ಯವಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

****************

ಸಮಾಜದಲ್ಲಿನ ತಳ ಸಮುದಾಯಗಳ ಅಭಿವೃದ್ಧಿಗಾಗಿ ಶ್ರಮಿಸುವುದೇ ಸರ್ಕಾರದ ಉದ್ದೇಶ ಎಂದು ಕೋಲಾರ ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಜನಪರ ಉತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶೋಷಿತ ಸಮುದಾಯಗಳು ಸಮಾಜ ಮುಖ್ಯವಾಹಿನಿಗೆ ಬರುವ ತನಕ ಮೀಸಲಾತಿ ಇರಬೇಕು ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಮಾತನಾಡಿ, ಜನಪದ ಮತ್ತ ಜನಪರ ಎರಡೂ ಒಂದೇಯಾಗಿದ್ದು, ಕಲೆಗಳನ್ನು ಮರೆಯುವ ಕೆಲಸ ಆಗಬಾರದು ಎಂದು ಅಭಿಪ್ರಾಯಪಟ್ಟರು.

ಧ್ವನಿ: ಶಿವರಾಜ್ ತಂಗಡಗಿ, ಸಚಿವ

****************

ಸಾಲ ಸೌಲಭ್ಯ ಕೋರಿ ಬ್ಯಾಂಕ್ ಗೆ ಬರುವ ಎಲ್ಲ ರೈತರಿಗೂ ಸಾಲ ಸಿಗುವಂತಾಗಬೇಕು. ಎಲ್ಲ ಬ್ಯಾಂಕ್ ಗಳು ರೈತ ಸ್ನೇಹಿಯಾಗಿ ಕೆಲಸ ನಿರ್ವಹಿಸಬೇಕು ಎಂದು ಬ್ಯಾಂಕ್ ಅಧಿಕಾರಿಗಳಿಗೆ ಸಂಸದ ಬಸವರಾಜ ಬೊಮ್ಮಾಯಿ ಸೂಚನೆ ನೀಡಿದ್ದಾರೆ.

ಹಾವೇರಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ನಡೆದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನೆ ಸಮಿತಿ ಹಾಗೂ ಜಿಲ್ಲಾ ಮಟ್ಟದ ಬ್ಯಾಂಕುಗಳ ಸಲಹಾ ಸಮಿತಿಯ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬ್ಯಾಂಕ್‌ಗಳು ರೈತ ಸ್ನೇಹಿಯಾಗಿ ಕಾರ್ಯ ನಿರ್ವಹಿಸಬೇಕು ಎಂದು ತಿಳಿಸಿದ್ದಾರೆ.

ಸಾಲ ನೀಡುವುದರಿಂದ ಆರ್ಥಿಕತೆ, ಉದ್ಯೋಗ, ಜಿಡಿಪಿ ಅಭಿವೃದ್ಧಿ ಯಾಗಲು ಬ್ಯಾಂಕ್‌ಗಳ ಪಾತ್ರ ಪ್ರಮುಖವಾಗಿದೆ. ಜಿಲ್ಲೆಯಲ್ಲಿ ಮುದ್ರಾ ಯೋಜನೆಯಡಿಯಲ್ಲಿ ೧ ಕೋಟಿ ೬೫ ಲಕ್ಷ ಜನರು ಸಾಲ ಸೌಲಭ್ಯ ಪಡೆದುಕೊಂಡಿದ್ದಾರೆ. ಕೃಷಿ ಅವಲಂಬಿತ ಹೈನುಗಾರಿಕೆ, ಮೀನುಗಾರಿಕೆ ಹಾಗೂ ಗುಡಿ ಕೈಗಾರಿಕೆಗೆ ಸಾಲ ಸೌಲಭ್ಯಗಳಿದ್ದು, ಈ ಯೋಜನೆ ಗಳು ಅರ್ಹ ಪಲಾನುಭವಿಗಳಿಗೆ ತಲುಪಬೇಕು ಎಂದು ನಿರ್ದೇಶನ ನೀಡಿದ್ದಾರೆ.

****************

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಚಾಲಕ ಮತ್ತು ನಿರ್ವಾಹಕರ ಮೇಲೆ ಪ್ರಯಾಣಿಕರು ಕ್ಷುಲ್ಲಕ ಕಾರಣಕ್ಕಾಗಿ ಹಲ್ಲೆ ಮಾಡಿರುವ ೬೩ ಪ್ರಕರಣಗಳ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಬೆಳಗಾವಿಯ ರಾಜ್ಯ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಗಾ, ಉತ್ತರ ವಲಯ ಐ.ಜಿ ಚೇತನ್ ಸಿಂಗ್ ರಾಠೋರ ಅವರಿಗೆ ಇಂದು ಮನವಿ ಸಲ್ಲಿಸಿದ್ದಾರೆ.

ಸಂಸ್ಥೆಯ ಸಿಬ್ಬಂದಿ ಭದ್ರತೆಯ ವಿಷಯದಲ್ಲಿ ಪೊಲೀಸ್ ಇಲಾಖೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿಯಲ್ಲಿ ತಿಳಿಸಿದ್ದಾರೆ.

****************

ಸಂಕ್ಷಿಪ್ತ ಸುದ್ದಿಗಳು

೧. ಮಹಾ ಶಿವರಾತ್ರಿ ಹಬ್ಬದ ಪ್ರಯುಕ್ತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕಸಾಯಿಖಾನೆಯಲ್ಲಿ ಪ್ರಾಣಿವಧೆ ಹಾಗೂ ಮಾರಾಟ ಮಳಿಗೆಗಳಲ್ಲಿ ಮಾಂಸ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಬಿಬಿಎಂಪಿ ಪಶುಪಾಲನೆ ವಿಭಾಗದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

೨. ಕ್ರೀಡೆಯಿಂದ ಮನಸ್ಸಿನ ಒತ್ತಡ ನಿವಾರಣೆಯಾಗಿ ನೆಮ್ಮದಿ ಸಿಗಲಿದೆ ಎಂದು ಸುರಪುರ ಮತಕ್ಷೇತ್ರದ ಶಾಸಕ ರಾಜಾ ವೇಣುಗೋಪಾಲ್ ನಾಯಕ್ ಯಾದಗಿರಿಯಲ್ಲಿ ತಿಳಿಸಿದ್ದಾರೆ.

೩. ಮಂಡ್ಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇ-ಖಾತಾ ನೀಡುವ ಅಭಿಯಾನ ಮುಂದುವರೆದಿದ್ದು, ಮೂರು ತಿಂಗಳೊಳಗೆ ಬಾಕಿ ಉಳಿದಿರುವ ಇ-ಖಾತಾ ಮಾಡಿಕೊಡಲಾಗುವುದು ಎಂದು ಮಂಡ್ಯ ಶಾಸಕ ರವಿಕುಮಾರ್ ಹೇಳಿದ್ದಾರೆ.

೪. ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಮುಸ್ಟೂರು ರಸ್ತೆ, ದಿನ್ನೆಹೊಸಹಳ್ಳಿ ರಸ್ತೆ, ಕಂದವಾರ ರಸ್ತೆ ಸೇರಿದಂತೆ ವಿವಿಧ ಸಂಪರ್ಕ ರಸ್ತೆಗಳನ್ನು ೨೦ ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿ ಪಡಿಸುವ ಪ್ರಕ್ರಿಯೆಯನ್ನು ಆರಂಭಿಸಲಾಗಿದೆ ಎಂದು ಶಾಸಕ ಪ್ರದೀಪ್ ಈಶ್ವರ್ ತಿಳಿಸಿದ್ದಾರೆ.

೫. ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಬೆಂಗಳೂರು ಹಾಗೂ ಜಿಲ್ಲಾ ಸಹಕಾರ ಯೂನಿಯನ್ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ ಎಲ್ಲಾ ಪಟ್ಟಣ ಸಹಕಾರ ಬ್ಯಾಂಕುಗಳ ಮತ್ತು ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ಮುಖ್ಯ ಕಾರ್ಯನಿರ್ವಾಹಕರು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ವಿಶೇಷ ತರಬೇತಿ ಶಿಬಿರ ನಡೆಯಿತು.

೬. ಮಾರ್ಚ್ ೦೧ ರಂದು ಚಿತ್ರದುರ್ಗದ ಮುರುಘರಾಜೇಂದ್ರ ಕ್ರೀಡಾಂಗಣದಲ್ಲಿ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಕಂಪನಿಗಳು ಪಾಲ್ಗೊಂಡು, ಜಿಲ್ಲೆಯ ಬಹಳಷ್ಟು ಅಭ್ಯರ್ಥಿಗಳಿಗೆ ಉದ್ಯೋಗ ದೊರಕುವಂತಾಗಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಸೂಚನೆ ನೀಡಿದ್ದಾರೆ.

********ಮುಕ್ತಾಯ********